# 15 ವರ್ಷಗಳ ನಂತರ ಮರಳಿದ 'ಬುದ್ಧಿವಂತ'



2008ರಲ್ಲಿ ತೆರೆಕಂಡ 'ಬುದ್ಧಿವಂತ' ಸಿನಿಮಾದಲ್ಲಿ ರಿಯಲ್ ಸ್ಟಾರ್ ಉಪೇಂದ್ರ ಏಳು ಭಿನ್ನ ಪಾತ್ರಗಳಲ್ಲಿ ಕಾಣಿಸಿಕೊಂಡು ಅಭಿಮಾನಿಗಳನ್ನು ರಂಜಿಸಿದ್ದರು. ಇದೀಗ ಕೆಲವೇ ದಿನಗಳಲ್ಲಿ 'ಬುದ್ಧಿವಂತ 2' ಆಗಿ ಬರಲು ಸಜ್ಜಾಗಿದ್ದಾರೆ.

'ಕಬ್ಜ' ಸಿನಿಮಾ ಬಿಡುಗಡೆಯಾದ ಬೆನ್ನಲ್ಲೇ, ಬುದ್ಧಿವಂತ 2 ಸಿನಿಮಾ ಬಿಡುಗಡೆ ತಯಾರಿ ಕೆಲಸವೂ ಭರದಿಂದ ಸಾಗಿದೆ. ಸದ್ಯ UI ಸಿನಿಮಾ ಶೂಟಿಂಗ್‌ನಲ್ಲಿರುವ ನಟ ಉಪೇಂದ್ರ ಅವರಿಗೆ ಬ್ಯಾಕ್ ಟು ಬ್ಯಾಕ್ ಸಿನಿಮಾಗಳು ಕೈಯಲ್ಲಿವೆ.

2008ರಲ್ಲಿ ಬಿಡುಗಡೆಯಾಗಿದ್ದ 'ಬುದ್ಧಿವಂತ' ಸಿನಿಮಾದಲ್ಲಿ ಏಳು ಪಾತ್ರ ನಿರ್ವಹಣೆ ಮೂಲಕ ರಿಯಲ್ ಸ್ಟಾರ್ ಉಪೇಂದ್ರ ಅಭಿಮಾನಿಗಳನ್ನು ರಂಜಿಸಿದ್ದರು. ಹದಿನೈದು ವರ್ಷಗಳ ನಂತರ ಅದೇ ಸಿನಿಮಾ ಶೀರ್ಷಿಕೆಯ 'ಬುದ್ಧಿವಂತ 2' ಸಿನಿಮಾದಲ್ಲಿ ಉಪೇಂದ್ರ ನಟಿಸಿದ್ದು, ಈ ಸಿನಿಮಾ ಬಿಡುಗಡೆ ಯಾವಾಗ ಎಂಬ ಕುತೂಹಲ ಅಭಿಮಾನಿಗಳಲ್ಲಿ ತುಂಬಿತ್ತು. ಆ ಕುತೂಹಲಕ್ಕೀಗ ತೆರೆಬಿದ್ದಿದೆ.

ಈಚೆಗೆ ವಿಡಿಯೊ ತುಣುಕೊಂದರ ಮೂಲಕ ಚಿತ್ರತಂಡ 'ಬುದ್ಧಿವಂತ 2' ಚಿತ್ರದ ಬಿಡುಗಡೆ ದಿನಾಂಕ ಘೋಷಣೆ ಮಾಡಿದೆ. ಈ ಮೂಲಕ ಸೆಪ್ಟೆಂಬರ್ 15ರಂದು ರಾಜ್ಯಾದ್ಯಂತ ಸಿನಿಮಾ ಅದ್ದೂರಿಯಾಗಿ ಬಿಡುಗಡೆಯಾಗಲಿದೆ ಎಂದು ತಿಳಿಸಿದೆ. ಅಭಿಮಾನಿ ಬಳಗದಲ್ಲಿ 'ಬುದ್ಧಿವಂತ' ಎಂದೇ ಜನಪ್ರಿಯರಾದ ನಟ ಉಪೇಂದ್ರ ಹುಟ್ಟುಹಬ್ಬ ಸೆಪ್ಟೆಂಬರ್ 18ರಂದು. ಹುಟ್ಟುಹಬ್ಬದ ಸಮಯದಲ್ಲೇ ಚಿತ್ರ ಕೂಡ ಬಿಡುಗಡೆಯಾಗುತ್ತಿದೆ.

ಕನ್ನಡ ಚಿತ್ರರಂಗದಲ್ಲಿ ಸಾಕಷ್ಟು ಚಿತ್ರಗಳನ್ನು ನಿರ್ಮಾಣ ಮಾಡಿರುವ ಟಿ.ಆರ್ ಚಂದ್ರಶೇಖರ್, ತಮ್ಮ ಕ್ರಿಸ್ಟಲ್ ಪಾರ್ಕ್ ಸಿನಿಮಾಸ್ ಲಾಂಛನದಲ್ಲಿ 'ಬುದ್ಧಿವಂತ 2' ಸಿನಿಮಾ ನಿರ್ಮಿಸಿದ್ದಾರೆ. ಜೈದೇವ್ ನಿರ್ದೇಶನದ ಈ ಚಿತ್ರಕ್ಕೆ ಗುರುಕಿರಣ್ ಸಂಗೀತ ನೀಡಿದ್ದಾರೆ. ಉಪೇಂದ್ರ ಅವರಿಗೆ ಜೋಡಿಯಾಗಿ ಸೋನಾಲ್ ಮೊಂತೆರೊ ಹಾಗೂ ಮೇಘನಾ ರಾಜ್ ಮಿಂಚಿದ್ದಾರೆ. ■

# 'ಪ್ರೇತ'ವಾಗಿ ಹರೀಶ್ ಕಮ್‌ಬ್ಯಾಕ್



ಕನ್ನಡ ಸಿನಿಮಾ ರಂಗಕ್ಕೆ ಕಾಲಿಟ್ಟು 25 ವರ್ಷ ಪೂರೈಸಿರುವ ಖುಷಿಯಲ್ಲಿರುವ ನಟ ಹರೀಶ್ ರಾಜ್, ಮತ್ತೆ ಸಿನಿಮಾ ರಂಗದಲ್ಲಿ ತಮ್ಮನ್ನು ತಾವು ಸಂಪೂರ್ಣ ತೊಡಗಿಸಿಕೊಳ್ಳಲು ನಿರ್ಧರಿಸಿದ್ದು, ನಿರ್ದೇಶನಕ್ಕೆ ಇಳಿದಿದ್ದಾರೆ.

ಮೊದಮೊದಲು ನಟನಾಗಿ ಹರೀಶ್ ಸಿನಿಮಾರಂಗದ ಹೊಸ್ತಿಲು ತುಳಿದವರು. ಹಲವು ಸಿನಿಮಾಗಳಲ್ಲಿ ಸಣ್ಣಪುಟ್ಟ ಪಾತ್ರಗಳಲ್ಲಿ ಮಿಂಚಿದ ಅವರು ಜನರ ಮನದಲ್ಲಿ ಉತ್ತಮ ಕಲಾವಿದನಾಗಿ ಗುರುತು ಮೂಡಿಸಿದರು. ನಾಯಕ ನಟನಾಗಿಯೂ ಅದೃಷ್ಟ ಪರೀಕ್ಷೆಗಿಳಿದಿದ್ದರು. ಕಲಾಕರ್, ಗನ್, ಶ್ರೀ ಸತ್ಯನಾರಾಯಣ, ಕಿಲಾಡಿ ಪೊಲೀಸ್ ಸೇರಿದಂತೆ ಹಲವು ಚಿತ್ರಗಳಿಗೆ ಆ್ಯಕ್ಷನ್ ಕಟ್ ಹೇಳಿದರು. ಇದೀಗ ಮೂರು ವರ್ಷಗಳ ನಂತರ ಕಮ್‌ಬ್ಯಾಕ್ ಮಾಡಿರುವ ಅವರು, ಈಚೆಗೆ ಹೊಸ ಸಿನಿಮಾ ಘೋಷಣೆ ಮಾಡಿದ್ದಾರೆ.

ತಮ್ಮದೇ ಹರೀಶ್ ರಾಜ್ ಪ್ರೊಡಕ್ಷನ್‌ನಡಿ 'ಪ್ರೇತ' ಎಂಬ ಚಿತ್ರ ನಿರ್ದೇಶಿಸಿ, ನಿರ್ಮಿಸುತ್ತಿದ್ದಾರೆ. ಮೊಬೈಲ್ ಟಾರ್ಚ್ ಬೆಳಕಿನಲ್ಲಿ ಕತ್ತಲ ಕಾಡಿನಲ್ಲಿ ಭಯಭೀತರಾಗಿ ನಿಂತಿರುವ ಹರೀಶ್ ರಾಜ್, ಅವರ ಹಿಂದೆ ಭೂತದ ಆಕೃತಿ ಇರುವ ಚಿತ್ರದ ಫಸ್ಟ್ ಲುಕ್ ಪೋಸ್ಟರ್ ಬಿಡುಗಡೆಯಾಗಿದೆ.

ಪ್ರೇತ, ಹಾರರ್ ಸಿನಿಮಾ ಆಗಿದ್ದು, ಈ ಚಿತ್ರಕ್ಕೆ ಹರೀಶ್ ಅವರೇ ಚಿತ್ರಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. ಅಹಿರಾ ಶೆಟ್ಟಿ, ಅಮೂಲ್ಯ ಭಾರದ್ವಾಜ್, ಬಿ.ಎಂ. ವೆಂಕಟೇಶ್, ಅಮಿತ್ ತಾರಾಬಳಗದಲ್ಲಿದ್ದಾರೆ. ಹಾಡುಗಳಿಗೆ ಪ್ರಮೋದ್ ಮರವಂತೆ ಸಾಹಿತ್ಯವಿದೆ.

ಅಷ್ಟೇ ಅಲ್ಲ, 'ಪ್ರೇತ' ಸಿನಿಮಾ ಕನ್ನಡ, ತಮಿಳು, ಹಿಂದಿ, ಮಲಯಾಳಂ ಹಾಗೂ ತೆಲುಗು ಭಾಷೆಯಲ್ಲಿ ಮೂಡಿಬರುತ್ತಿರುವುದಾಗಿ ತಂಡ ಹೇಳಿದೆ. ಈಗಾಗಲೇ ಶೂಟಿಂಗ್ ಮುಗಿಸಿ ಪೋಸ್ಟ್ ಪ್ರೊಡಕ್ಷನ್ ಹಂತದಲ್ಲಿರುವ ಪ್ರೇತ ಸಿನಿಮಾವನ್ನು ಆಗಸ್ಟ್ ಅಥವಾ ಸೆಪ್ಟೆಂಬರ್ ವೇಳೆಗೆ ತೆರೆಗೆ ತರಲು ಚಿತ್ರತಂಡ ಸಿದ್ಧತೆ ನಡೆಸಿದೆ.

ಪ್ರಯೋಗಾತ್ಮಕ ಸಿನಿಮಾಗಳಿಗೆ ಮನ್ನಣೆ ಸಿಗುತ್ತಿರುವ ಈ ಸಮಯದಲ್ಲಿ, ಮೂರು ವರ್ಷಗಳ ನಂತರ ನಿರ್ದೇಶನಕ್ಕೆ ಮರಳಿರುವ ಹರೀಶ್ ರಾಜ್ ಸಿನಿಮಾ ಬಗ್ಗೆ ನಿರೀಕ್ಷೆಯೂ ಹೆಚ್ಚಿದೆ. ■